ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ವಿದ್ಯಾರ್ಥಿ/ಶಾ.ನೇ.ಮಾ.ಸಂ.ಅ.ಸ.ವಿ.ವೇ.2018.F.B./2018–19

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು–12.
ದಿನಾಂಕ: __–06–2018
02-07-2018

## ಪ್ರಕಟಣೆ

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ಹೊಸದೆಹಲಿ ಇವರ ವತಿಯಿಂದ ಮಾರ್ಚ್/ಏಪ್ರಿಲ್ 2018ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ **ಸಂಯೋಜನೆವಾರು Top 20th Percentile or 80th** Percentileಗಿಂತ ಹೆಚ್ಚು ಅಂಕಗಳಿಸಿದ ಹಾಗೂ ತಮ್ಮ ವಿದ್ಯಾಭ್ಯಾಸವನ್ನು **ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ**(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ) ವಿದ್ಯಾರ್ಥಿಗಳಿಂದ **Central Sector Scheme of Scholorship** for College and University Studentsಗಳಿಗೆonline ಮೂಲಕ ಅರ್ಜಿ **ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ.** ಈ ಸಂಬಂಧವಾಗಿ ಕೇಂದ್ರ ಸರ್ಕಾರದ **ವತಿಯಿಂದ website:www.scholarships.gov.in**ನ **National e-Scholarship Portal**ನಲ್ಲಿ ಹೊಸ **ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ.** ಆದಕಾರಣ, ಈ portalನಲ್ಲಿಯೇ**2018ರFresh Batch**ನ**ವಿದ್ಯಾರ್ಥಿಗಳು ಅರ್ಜಿಗಳನ್ನು "online"**ಮೂಲಕ ಸಲ್ಲಿಸಬೇಕಿರುತ್ತದೆ.(Link for submission of **application - website:www.scholarships.gov.in=»New User(Register).** ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ **ಬ್ಯಾಚ್**ನ ಕಾರ್ಯ ಜಾರಿಯಲ್ಲಿದ್ದು,ಶೀಘ್ರದಲ್ಲಿಯೇ ಪೂರ್ಣಗೊಳ್ಳಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಆಗಾಗ **ಈ ವೆಬ್‌ಸೈಟನ್ನು** ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೂಡಲೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ **ದಿನಾಂಕದೊಳಗಾಗಿ "online"**ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಹಾಗೂ 2018ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ **ನವೀಕರಣಗಳಿಗೆ) ಅರ್ಜಿ** ಸಲ್ಲಿಸಲಿಚ್ಚಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ **ಮಾಡಬೇಕಿರುತ್ತದೆ.** ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ **ಹೊಂದಿರಬೇಕಾಗಿ ಈ ಮೂಲಕ** ತಿಳಿಸಿದೆ.

ವಿದ್ಯಾರ್ಥಿಗಳು **"online"**ಮೂಲಕಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ **ದಾಖಲೆಗಳ ಜೊತೆಯಲ್ಲಿ)** ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ **ಸರ್ಕಾರದಿಂದ ನಿಗದಿ** ಪಡಿಸುವದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online"**ಮೂಲಕ ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ **ಕೂಲಂಕುಷವಾಗಿ** ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ **ಬಗ್ಗೆ ಹಾಗೂ** ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು **ಪರಿಶೀಲಿಸಿ ಖಚಿತ** ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online"**ಮೂಲಕವೇಕೇಂದ್ರ ಸರ್ಕಾರದ ವತಿಯಿಂದ ನಿಗದಿ **ಪಡಿಸುವ** ದಿನಾಂಕದೊಳಗಾಗಿ ಇಲಾಖೆಗೆ ಸಲ್ಲಿಸಲು( **Forward** ಮಾಡಲು) ಕೋರಿದೆ. ಯಾವುದೇ ಕಾರಣಕ್ಕೂ **ನೈಜ ವಿದ್ಯಾರ್ಥಿಯು** ಹೊರತು ಅಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ **ನೋಡಿಕೊಳ್ಳುವ ಜವಾಬ್ದಾರಿ** ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. **ವಿದ್ಯಾರ್ಥಿ ವೇತನದ** ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪ್ರಸ್ತುತ **National e-Scholarship Portal**ನಲ್ಲಿ ವಿದ್ಯಾರ್ಥಿ **ವೇತನದ** ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ.ಪ್ರಕ್ರಿಯೆ ಚಾಲನೆಗೊಂಡ ಕೂಡಲೇ **ಸದರಿ ವಿದ್ಯಾರ್ಥಿ** ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ **Website:http://pue.kar.nic.in=» Scholarship =» MHRD Scholarship =» MHRD Scholarship 2018-Fresh batch**ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿರುತ್ತದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರಾಂಶುಪಾಲರು
ಆದಿಚುಂಚನಗಿರಿ ತಾಂತ್ರಿಕ ಮಹಾವಿದ್ಯಾಲಯ
ಚಿಕ್ಕಮಗಳೂರು–577102